ವಿಷಯ : ಸೋಮವಾರಪೇಟೆ ತಾಲ್ಲೂಕಿನ ಶಾಂತಹಳ್ಳಿಯಲ್ಲಿ ಪ್ರವಾಸಿ ಮಂದಿರದ ನಿರ್ಮಾಣದ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 407 (43)

ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಶಾಂತಹಳ್ಳಿಯಲ್ಲಿ ಪ್ರವಾಸಿಮಂದಿರದ ನಿರ್ಮಾಣದ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು)

ಅ) ಈ ಕಾಮಗಾರಿಯು 1994-95ನೇ ಸಾಲಿನ ಆಯವ್ಯಯದಲ್ಲಿ ಸೇರಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ : ಸೋಮವಾರಪೇಟೆ ತಾಲ್ಲೂಕಿನ ಮಾದಾಪುರದಲ್ಲಿ ಪ್ರವಾಸಿ ಮಂದಿರದ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 408 (40)

ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಮಾದಾಪುರದಲ್ಲಿ ಪ್ರವಾಸಿ ಮಂದಿರ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಈ ಕಾಮಗಾರಿಯು ಈ ವರೆವಿಗೂ ಆಯವ್ಯಯದಲ್ಲಿ ಸೇರಿರುವುದಿಲ್ಲ.

ವಿಷಯ : ಸೇಡಂ ಕ್ಷೇತ್ರದ ಚಿತ್ತಾಪುರ ತಾಲ್ಲೂಕು ಅಳ್ಳಳ್ಳಿ,ಕುಂಡಿಪಲ್ಲಿ ಕೆರೆ, ನೈದಿಲ್ ಕೆರೆ ಕೂಡಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 409 (668)

ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?